**ದಿನಾಂಕ 27.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಹೇಳಿಕೆಯ ಧೃಡಿಕೃತ ಪ್ರತಿಯನ್ನು ನಿಪಿ 23 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಪ್ರಮಾಣ ಪತ್ರದಲ್ಲಿ ತಿಳಿಸಿರುವ ವ್ಯಕ್ತಿ ನಾನೇ ಮತ್ತು ಅದರಲ್ಲಿ ನಮೂದಿಸಿದ ವಿಳಾಸದಲ್ಲಿ ವಾಸವಾಗಿರುವ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ. ಅಂತಿಮ ವರದಿಯಲ್ಲಿ ನನ್ನ ಹೆಸರು ನಮೂದು ಇಲ್ಲ ಎಂದರೆ ಸರಿಯಲ್ಲ. ಅಪಘಾತವಾದಾಗ ನಾನು ರಸ್ತೆಯನ್ನು ದಾಟುತ್ತಿದ್ದೆ. ಅಪಘಾತವಾದಾಗ ನಾನು ಹೂ ತರಲು ಅಲ್ಲಿಗೆ ಹೋಗಿದ್ದೆ. ಅಪಘಾತವಾದ ಸ್ಥಳದಲ್ಲಿ ಯಾವುದೇ ಹೂ ಅಂಗಡಿಗಳು ಇಲ್ಲ ಮತ್ತು ಆ ಬಗ್ಗೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತವಾದ ಸ್ಥಳದಲ್ಲಿ ನಾನು ಇರಲಿಲ್ಲ ಮತ್ತು ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ 23 ಅನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ.

2ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**